179 ಡಾ॥ ಶರಣಪ್ರಕಾಶ ರುದ್ರಪ್ಪ ಪಾಟೀಲ್ (ಸೇಡಂ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸುವರ್ಣ ಆರೋಗ್ಯ ಸುರಕ್ಷಾ ಆರೋಗ್ಯ ವಿಮೆ ಯೋಜನೆ ಇನ್ನೂ ಅನುಷ್ಠಾನಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಯಾವಾಗ ಯೋಜನೆ ಪೂರ್ಣ ಪ್ರಮಾಣದಲ್ಲಿ ಪ್ರಾರಂಭವಾಗುವುದು; ವಿವರ ನೀಡುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಈ ಯೋಜನೆಯು 2010ರ ಜನವರಿ ತಿಂಗಳಿನಲ್ಲಿ ಪೂರ್ಣ ಪ್ರಮಾಣದಲ್ಲಿ ಪ್ರಾರಂಭಗೊಳ್ಳಲಿದೆ.

ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಜನರು ಮಾರಣಾಂತಿಕ ಕಾಯಿಲೆಗಳಿಗೆ ಒಳಗಾದಲ್ಲಿ ಉಚಿತ ಚಿಕಿತ್ಸೆ ಸೌಲಭ್ಯ ಒದಗಿಸಬೇಕೆಂಬ ಹಿತದೃಷ್ಟಿಯಿಂದ ಸುವರ್ಣ ಆರೋಗ್ಯ ಸುರಕ್ಷಾ ವಿಮಾ ಯೋಜನೆಯನ್ನು ಪ್ರಾಯೋಗಿಕವಾಗಿ ಗುಲ್ಬರ್ಗಾ ವಿಭಾಗದ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.

ಈ ಯೋಜನೆಯಡಿ ಮಾರಣಾಂತಿಕ ಕಾಯಿಲೆಗಳಾದ ಹೃದ್ರೋಗ, ಕ್ಯಾನ್ಸರ್, ಮೂತ್ರಪಿಂಡ ವೈಫಲ್ಯತೆ, ನರರೋಗ ಇತ್ಯಾದಿಗಳಿಗೆ ಫಲಾನುಭವಿಯ ಕುಟುಂಬವೊಂದಕ್ಕೆ ವಾರ್ಷಿಕ ಗರಿಷ್ಠ ರೂ.1.50,000/–ರಂತೆ ಫ್ಯಾಮಿಲಿ ಫ್ಲೋಟರ್ ಆಧಾರದ ಮೇಲೆ ನೆಟ್‌ವರ್ಕ್ ಆಸ್ಪತ್ರೆಗಳ ಮೂಲಕ ಉಚಿತವಾಗಿ ಚಿಕಿತ್ಸೆ ಪಡೆಯಬಹುದಾಗಿದೆ. ಗರಿಷ್ಠ ಮೊತ್ತವು ಮೀರಿದ ವಿಶೇಷ ಪ್ರಕರಣಗಳಲ್ಲಿ ಪ್ರತೀ ರೂ.50.000/– ದಂತೆ ಹೆಚ್ಚುವರಿ ಮೊತ್ತಕ್ಕೆ ಸಮನಾಗಿ ಉಚಿತವಾಗಿ ಚಿಕಿತ್ಸೆ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಈ ಯೋಜನೆಯನ್ನು ಸರ್ಕಾರ ರಚಿಸಿರುವ ಟ್ರಸ್ಟ್ ಮೂಲಕ ಜಾರಿಗೊಳಿಸ ಲಾಗುತ್ತಿದೆ.